## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಸಮಾಜ ಕಲ್ಯಾಣ ಇಲಾಖೆಯಿಂದ ಪರಿಶಿಷ್ಟ ಜಾತಿ ಮತ್ತು ಪಂಗಡಗಳ ಕಾನೂನು ಪದವಿಧಾರರಿಗೆ ನ್ಯಾಯವಾದಿ ವೃತ್ತಿಯ ಪ್ರಾಯೋಗಿಕ ತರಬೇತಿ ಕಾರ್ಯಕ್ರಮದಡಿ ಮಾಸಿಕ ತರಬೇತಿ ಭತ್ಯೆಯನ್ನು ಹೆಚ್ಚಿಸುವ ಬಗ್ಗೆ

ಓದಲಾಗಿದೆ: 1) ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ ಇವರ ಏಕಕಡತ ಸಂಖ್ಯೆ:ಸಕನಿ/ಸಿಎಸ್-2/ಸಿಆರ್-03/ಕಾ.ಪ/2017-18 ದಿನಾಂಕ:04-04-2017

2) ನಿರ್ದೇಶಕರು, ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆ ಇವರ ಏಕಕಡತ ಸಂಖ್ಯೆ:ಪವಕನಿ/ಇಡಿ-1/ಸಿಆರ್-01/2017-18 ದಿನಾಂಕ:07-04-2017

3) ಸರ್ಕಾರದ ಆದೇಶ ಸಂಖ್ಯೆ:ಸಕಇ 187 ಪಕವಿ 2010 ದಿನಾಂಕ:25-11-2011

******

**ಪ್ರಸ್ತಾವನೆ:**

ಮೇಲೆ ಓದಲಾದ ಏಕಕಡತದಲ್ಲಿನ ಪ್ರಸ್ತಾವನೆಗಳಲ್ಲಿ ಸಮಾಜ ಕಲ್ಯಾಣ ಇಲಾಖೆಯಿಂದ ಪರಿಶಿಷ್ಟ ಜಾತಿ ಮತ್ತು ಪಂಗಡಗಳ ಕಾನೂನು ಪದವಿಧಾರರಿಗೆ ನ್ಯಾಯವಾದಿ ವೃತ್ತಿಯ ಪ್ರಾಯೋಗಿಕ ತರಬೇತಿ ಕಾರ್ಯಕ್ರಮದಡಿ ಮಾಸಿಕ ತರಬೇತಿ ಭತ್ಯೆಯನ್ನು ಹೆಚ್ಚಿಸುವ ಬಗ್ಗೆ ಸರ್ಕಾರದ ಆದೇಶ ಹೊರಡಿಸುವಂತ ಕೋರಿರುತ್ತಾರೆ.

2017-18ನೇ ಸಾಲಿನ ಆಯವ್ಯಯ ಘೋಷಣೆ ಕೆಳಕಂಡಂತಿದೆ.

ಕಂಡಿಕೆ ಸಂಖ್ಯೆ:175 – "ಕಾನೂನು ಪದವೀಧರರಿಗೆ ಮಾಸಿಕ ತರಬೇತಿ ಭತ್ಯೆಯನ್ನು ರೂ.2,000/-ಗಳಿಂದ ರೂ.5,000/-ಗಳಿಗೆ ಹೆಚ್ಚಿಸಲಾಗುವುದು".

ಸದರಿ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿದ ನಂತರ ಈ ಕೆಳಕಂಡಂತೆ ಆದೇಶ.

**ಸರ್ಕಾರದ ಆದೇಶ ಸಂಖ್ಯೆ:ಸಕಇ 262 ಪಕವಿ 2017(ಭಾ), ಬೆಂಗಳೂರು ದಿನಾಂಕ:15-04-2017**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಸಮಾಜ ಕಲ್ಯಾಣ ಇಲಾಖೆಯಿಂದ ಪರಿಶಿಷ್ಟ ಜಾತಿ ಮತ್ತು ಪಂಗಡಗಳ ಕಾನೂನು ಪದವಿಧಾರರಿಗೆ ನ್ಯಾಯವಾದಿ ವೃತ್ತಿಯ ಪ್ರಾಯೋಗಿಕ ತರಬೇತಿ ಕಾರ್ಯಕ್ರಮದಡಿ ಮಾಸಿಕ ತರಬೇತಿ ಭತ್ಯೆಯನ್ನು ಹಾಲಿ ನೀಡುತ್ತಿರುವ ಮಾಹೆಯಾನ ರೂ.2,000/-ಗಳಿಂದ ರೂ.5,000/-ಕ್ಕೆ ಹೆಚ್ಚಿಸಿ ಆದೇಶ ಹೊರಡಿಸಲಾಗಿದೆ.

ಸದರಿ ಯೋಜನೆಯಡಿ ಮಾಸಿಕ ತರಬೇತಿ ಭತ್ಯೆಯನ್ನು ನೀಡುವಲ್ಲಿ ಸರ್ಕಾರದ ಆದೇಶ ಸಂಖ್ಯೆ:ಸಕಇ 187 ಪಕವಿ 2010 ದಿನಾಂಕ: 25-11-2011 ರಲ್ಲಿ ಇರುವ ಮಾರ್ಗಸೂಚನೆಗಳನ್ನು ಯಥಾವತ್ತಾಗಿ ಪಾಲಿಸತಕ್ಕದ್ದು.

ಇದಕ್ಕೆ ತಗಲುವ ವೆಚ್ಚವನ್ನು ಪರಿಶಿಷ್ಟ ಜಾತಿಗೆ ಸಂಬಂಧಿಸಿದಂತೆ ಲೆಕ್ಕಶೀರ್ಷಿಕೆ:2225-00-101-0-80 ಮತ್ತು ಪರಿಶಿಷ್ಟ ಪಂಗಡಕ್ಕೆ ಸಂಬಂಧಿಸಿದಂತೆ ಲೆಕ್ಕಶೀರ್ಷಿಕೆ:2225-00-102-0-38 ರಡಿ ಭರಿಸತಕ್ಕದ್ದು.

22.1.22

ಈ ಆದೇಶವು 2017-18ನೇ ಆರ್ಥಿಕ ವರ್ಷದಿಂದ ಜಾರಿಗೆ ಬರುತ್ತದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಘಟನೋತ್ತರ ಅನುಮೋದನೆ ಪಡೆಯುವ ಷರತ್ತಿಗೊಳಪಟ್ಟು ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಗಿರಿಜಮ್ಮ
ಸರ್ಕಾರದ ಅಧೀನ ಕಾರ್ಯದರ್ಶಿ-1,
ಸಮಾಜ ಕಲ್ಯಾಣ ಇಲಾಖೆ.

ಗೆ:

1) ಮಹಾಲೇಖಪಾಲರು (ಲೆಕ್ಕಪರಿಶೋಧನೆ-1 ಮತ್ತು 2), ಕರ್ನಾಟಕ, ಬೆಂಗಳೂರು
2) ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು
3) ನಿರ್ದೇಶಕರು, ಪರಿಶಿಷ್ಟ ವಂಗಡಗಳ ಕಲ್ಯಾಣ ಇಲಾಖೆ, ಬೆಂಗಳೂರು
4) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

ಪ್ರತಿ ಮಾಹಿತಿಗಾಗಿ:

1. ಮಾನ್ಯ ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ.
2. ಸರ್ಕಾರದ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ.
3. ಸರ್ಕಾರದ ಉಪ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ ಇವರ ಆಪ್ತ ಸಹಾಯಕ, ವಿಕಾಸಸೌಧ.
4. ಅಧ್ಯಕ್ಷರು, ಕನ್ನಡ ಅಭಿವೃದ್ಧಿ ಪ್ರಾಧಿಕಾರ, ಕೊಠಡಿ ಸಂಖ್ಯೆ 206, 2ನೇ ಮಹಡಿ, ವಿಧಾನಸೌಧ, ಬೆಂಗಳೂರು.

****